ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 840 (982)
ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 20-09-2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	6 ರಿಂದ 8ನೇ ತರಗತಿಯ ಪದವೀಧರ ಶಿಕ್ಷಕರ ನೇಮಕಾತಿಗೆ ಅರ್ಹತೆ ಪಡೆಯಲು ಸ್ಪರ್ಧಾತ್ಮಕ ಪರೀಕ್ಷೆಯ ಪತ್ರಿಕೆ-2 ಹಾಗೂ ಪತ್ರಿಕೆ-3ರಲ್ಲಿ ಕನಿಷ್ಠ ಇಂತಿಷ್ಟು ಅಂಕಗಳನ್ನು ಪಡೆಯಲೇಬೇಕೆಂಬ ನಿಯಮದಿಂದ ಖಾಲಿ ಶಿಕ್ಷಕರ ಹುದ್ದೆಗಳ ಭರ್ತಿಗೆ ಅಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ.	6 ರಿಂದ 8ನೇ ತರಗತಿಯ ಪದವೀಧರ ಶಿಕ್ಷಕರ ಹುದ್ದೆಗಳ ಮುಂದಿನ ನೇಮಕಾತಿ ಸದರಿ ನಿಯಮಗಳನ್ನು ರದ್ದುಪಡಿಸುವ ಅಥವಾ ಕಡಿತಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು;	ಇಲ್ಲ.
ಇ.	6 ರಿಂದ 8ನೇ ತರಗತಿಯ ಪದವೀಧರ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿ ಮಾಡಲಾಗುವುದು ಯಾವಾಗ;	ಮಾನ್ಯ ಮುಖ್ಯಮಂತ್ರಿಗಳು ದಿನಾಂಕ:05-09-2021ರ ಶಿಕ್ಷಕರ ದಿನಾಚರಣೆಯಂದು ಪ್ರಸಕ್ತ ಸಾಲಿನಲ್ಲಿ 5,000 ಶಿಕ್ಷಕರ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ಘೋಷಿಸಿರುತ್ತಾರೆ. ಈ ಸಂಬಂಧ ಆಡಳಿತಾತ್ಮಕ ಕ್ರಮ ಕೈಗೊಳ್ಳಲು ಪರಿಶೀಲಿಸಲಾಗುತ್ತಿದೆ.

ಸಂಖ್ಯೆ: ಇಪಿ 33 ಪಿಎಂಎ 2021

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ
ಹಾಗೂ ಸಕಾಲ ಸಚಿವರು